# Akashvani : Bangalore
# National Bulletin In Kannada
# 06.11.2024 / 7.35 am

## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
## 06.11.2024 / 7.35 am

<><*<><>*><>

<u>ಮುಖ್ಯಾಂಶಗಳು</u>

೧. ಜಲ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸಲು ಇಂದಿನಿಂದ ೧೫ ದಿನಗಳ ಕಾಲ ರಾಷ್ಟ್ರವ್ಯಾಪಿ ’ಜಲ ಉತ್ಸವ’

೨. ಅಮೆರಿಕ ಅಧ್ಯಕ್ಷೀಯ ಚುನಾವಣಾ ಮತದಾನ ಪ್ರಕ್ರಿಯೆ ಪ್ರಗತಿಯಲ್ಲಿ; ಮತ ಹಕ್ಕು ಚಲಾಯಿಸಿದ ಡೊನಾಲ್ಡ್ ಟ್ರಂಪ್- ಕಮಲಾ ಹ್ಯಾರಿಸ್

೩. ೫೫ನೇ ಭಾರತ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ; ಇದೇ ೨೦ ರಿಂದ ಗೋವಾದಲ್ಲಿ ಆರಂಭ

೪. ವಿಶ್ವ ಬಾಕ್ಸಿಂಗ್ ಫೆಡರೇಶನ್‌ನ ಸೂಪರ್ ಫೆದರ್‌ವೇಟ್‌ನಲ್ಲಿ ವಿಶ್ವ ಚಾಂಪಿಯನ್ ಆಗಿ ಹೊರಹೊಮ್ಮಿದ ಭಾರತದ ಮನ್‌ದೀಪ್ ಜಂಗ್ರಾ

<><*<><>*><>

ನೀರು ನಿರ್ವಹಣೆ, ಸಂರಕ್ಷಣೆ ಮತ್ತು ಸುಸ್ಥಿರತೆಯ ಬಗ್ಗೆ ಅರಿವು ಮತ್ತು ಸಂವೇದನೆಯನ್ನು ಮೂಡಿಸಲು ನೀತಿ ಆಯೋಗ ಇಂದಿನಿಂದ ೧೫ ದಿನಗಳ ’ಜಲ ಉತ್ಸವ’ವನ್ನು ಪ್ರಾರಂಭಿಸಲಿದೆ. ಕಳೆದ ವರ್ಷ ಡಿಸೆಂಬರ್‌ನಲ್ಲಿ ನಡೆದ ೩ನೇ ಮುಖ್ಯ ಕಾರ್ಯದರ್ಶಿಗಳ ಸಮ್ಮೇಳನದಲ್ಲಿ ‘ನಾಡಿ ಉತ್ಸವ’ ಮಾದರಿಯಲ್ಲಿ ‘ಜಲ ಉತ್ಸವ’ದ ಕಲ್ಪನೆಯನ್ನು ಪ್ರಸ್ತಾಪಿಸಿದ ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯನ್ನು ಈ ಅಭಿಯಾನ ಅನುಸರಿಸುತ್ತದೆ. ಇದೇ ೬ ರಿಂದ ೨೪ ರವರೆಗೆ ೨೦ ಮಹತ್ವಾಕಾಂಕ್ಷೆಯ ಜಿಲ್ಲೆಗಳು ಮತ್ತು ಬ್ಲಾಕ್‌ಗಳಲ್ಲಿ ಜಲ ಉತ್ಸವವನ್ನು ಆಚರಿಸಲಾಗುತ್ತದೆ. ಇದು ಜಲಸಂಪನ್ಮೂಲಗಳ ಸಂರಕ್ಷಣೆಯಲ್ಲಿ ಸಮುದಾಯದ ಭಾಗವಹಿಸುವಿಕೆಗೆ ಅನುವು ಮಾಡಿಕೊಡುತ್ತದೆ. ಮನೆಗಳಲ್ಲಿ ಸಮರ್ಥ ನೀರಿನ ಬಳಕೆ, ಉಪಯುಕ್ತತೆಗಳು ಮತ್ತು ನೀರಿನ ನಿರ್ವಹಣೆಯ ಕಡೆಗೆ ಜವಾಬ್ದಾರಿಯ ಪ್ರಜ್ಞೆಯನ್ನು ಮೂಡಿಸಲು ಪ್ರಯತ್ನಿಸುತ್ತದೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಛತ್ತೀಸ್‌ಘಡಕ್ಕೆ ಇಂದು ಒಂದು ದಿನದ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ರಾಯಪುರದಲ್ಲಿ ನಡೆಯಲಿರುವ ಛತ್ತೀಸ್‌ಘಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

<><*<><>*><>

ಅಮೆರಿಕದ ಅಧ್ಯಕ್ಷೀಯ ಚುನಾವಣೆಗೆ ಮತದಾನ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಲಕ್ಷಾಂತರ ಮತದಾರರು ತಮ್ಮ ಹಕ್ಕನ್ನು ಚಲಾಯಿಸುತ್ತಿದ್ದಾರೆ. ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಮತ್ತು ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರ ನಡುವೆ ಅಧ್ಯಕ್ಷ ಸ್ಥಾನಕ್ಕೆ ತೀವ್ರ ಪೈಪೋಟಿ ಏರ್ಪಟ್ಟಿದೆ. ಅಮೆರಿಕದ ಕಾಲಮಾನದ ಪ್ರಕಾರ ನಿನ್ನೆ ಮುಂಜಾನೆಯಿಂದಲೇ ಮತದಾನ ಪ್ರಕ್ರಿಯೆ ನಡೆಯುತ್ತಿದ್ದು, ಮತದಾರರು ಸರತಿ ಸಾಲಿನಲ್ಲಿ ನಿಂತು ಮತದಾನ ಪ್ರಕ್ರಿಯೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದಾರೆ. ಪೂರ್ವ ರಾಜ್ಯಗಳು ಮತ್ತು ಎಲ್ಲಾ ಆರು ವಲಯಗಳಲ್ಲಿ ಮತದಾನ ಪ್ರಕ್ರಿಯೆ ಪ್ರಗತಿಯಲ್ಲಿದೆ. ಡೊನಾಲ್ಡ್ ಟ್ರಂಪ್ ಮತ್ತು ಅವರ ಪತ್ನಿ ಮೆಲಾನಿಯಾ ಫ್ಲೋರಿಡಾ ಮತಗಟ್ಟೆಯಲ್ಲಿ ತಮ್ಮ ಹಕ್ಕು ಚಲಾಯಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಅಮೆರಿಕದ ಮತದಾರರು ತಮಗೆ ಜಯ ತಂದುಕೊಡಲಿದ್ದಾರೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಈ ನಡುವೆ ಕಮಲಾ ಹ್ಯಾರಿಸ್, ಇ-ಮೇಲ್ ಮುಖಾಂತರ ತಮ್ಮ ಹಕ್ಕು ಚಲಾಯಿಸಿದ್ದು, ಪ್ರತಿಯೊಬ್ಬ ಅಮೆರಿಕನ್ನರು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದ್ದಾರೆ. ಚುನಾವಣಾ ದಿನದ ಮೊದಲೇ ೮೩ ದಶಲಕ್ಷಕ್ಕೂ ಅಧಿಕ ಮತದಾರರು ತಮ್ಮ

ಮೇಲ್ ಅಥವಾ ಖುದ್ದಾಗಿ ಮತ ಚಲಾಯಿಸಿದ್ದಾರೆ. ಮತದಾನ ಪೂರ್ಣಗೊಳ್ಳುತ್ತಿದ್ದಂತೆಯೇ ಚುನಾವಣಾ ಫಲಿತಾಂಶ ನಿರೀಕ್ಷಿಸಬಹುದಾದರೂ ಮುಂದಿನ ಅಮೆರಿಕಾ ಅಧ್ಯಕ್ಷರು ಯಾರೆಂದು ತಕ್ಷಣ ನಿರ್ಧಾರವಾಗುವುದಿಲ್ಲ. ಅಮೆರಿಕಾದಲ್ಲಿ, ಅಧ್ಯಕ್ಷರ ಚುನಾವಣಾ ಪ್ರಕ್ರಿಯೆಯು ಎಲೆಕ್ಟೋರಲ್ ಕಾಲೇಜ್ ಎಂಬ ಪರೋಕ್ಷ ಚುನಾವಣಾ ವ್ಯವಸ್ಥೆಯಿಂದ ನಡೆಯುವುದು. ಮುಂದಿನ ಅಧ್ಯಕ್ಷರಾಗಲು ಬಯಸುವ ಅಭ್ಯರ್ಥಿಗೆ ೫೩೮ ಎಲೆಕ್ಟೋರಲ್ ಕಾಲೇಜು ಮತಗಳಲ್ಲಿ ೨೭೦ ಅಥವಾ ಹೆಚ್ಚಿನ ಮತಗಳ ಸಂಪೂರ್ಣ ಬಹುಮತದ ಅಗತ್ಯವಿದೆ. ಮುಂದಿನ ವರ್ಷ ಜನವರಿ ೬ ರಂದು ಅಮೆರಿಕ ಸಂಸತ್ತಿನ ಜಂಟಿ ಅಧಿವೇಶನದಲ್ಲಿ ಚುನಾವಣಾ ಮತಗಳ ಎಣಿಕೆ ಕಾರ್ಯ ನಡೆಯಲಿದೆ.

<><*<><>*><>

೫೫ನೇ ಭಾರತ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಇದೇ ೨೦ ರಿಂದ ೨೮ರವರೆಗೆ ಗೋವಾದಲ್ಲಿ ನಡೆಯಲಿದೆ. ಈ ಸಂದರ್ಭದಲ್ಲಿ ಭಾರತೀಯ ಚಲನಚಿತ್ರ ರಂಗದ ದಂತಕಥೆಗಳಾಗಿರುವ ರಾಜ್‌ಕಪೂರ್, ತಪನ್ ಸಿನ್ಹಾ, ಅಕ್ಕಿನೇನಿ ನಾಗೇಶ್ವರ್ ರಾವ್ ಮತ್ತು ಮೊಹಮ್ಮದ್ ರಫಿ ಅವರ ಗೌರವಾರ್ಥ, ಅವರು ನಟಿಸಿದ ಚಲನಚಿತ್ರಗಳನ್ನು ಪ್ರದರ್ಶಿಸಲಾಗುವುದು. ಹಲವು ಮಹಾನ್ ನಟರು ನಟಿಸಿರುವ ಜನಪ್ರಿಯ ಚಲನಚಿತ್ರಗಳ ಪ್ರದರ್ಶನದ ಜೊತೆಗೆ ಸಂವಾದ ಮತ್ತಿತರ ಕಾರ್ಯಕ್ರಮಗಳು ನಡೆಯಲಿವೆ. ರಾಜ್‌ಕಪೂರ್ ಅವರ 'ಆವಾರಾ' ಚಿತ್ರದ ಡಿಜಿಟಲ್ ರೂಪಾಂತರ ಪ್ರದರ್ಶನ ನಡೆಯಲಿದೆ. ನಾಗೇಶ್ವರ್ ರಾವ್ ಅವರು ನಟಿಸಿದ 'ದೇವದಾಸು' ಚಿತ್ರ ಪ್ರದರ್ಶನ, ತಪನ್ ಸಿನ್ಹಾ ಅವರ ಶಾಸ್ತ್ರೀಯ ಹಾರ್ಮೋನಿಯಮ್ ಮತ್ತು ಮೊಹಮ್ಮದ್ ರಫಿ ಅವರ ಜನಪ್ರಿಯ ಗೀತೆಗಳ ಗಾಯನ ಉತ್ಸವದ ಭಾಗವಾಗಿರಲಿವೆ.

<><*<><>*><>

ಎರಡನೇ ಹಂತದಲ್ಲಿ ಭಾರತ್ ಬ್ರ್ಯಾಂಡ್ ಅಕ್ಕಿ ಮತ್ತು ಗೋಧಿ ಹಿಟ್ಟನ್ನು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ, ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ನವದೆಹಲಿಯಲ್ಲಿ ನಿನ್ನೆ ಮಾರುಕಟ್ಟೆಗೆ ಬಿಡುಗಡೆಗೊಳಿಸಿದರು. ರೈತರಿಗೆ ನ್ಯಾಯಯುತ ಬೆಲೆಯನ್ನು ಖಾತರಿಪಡಿಸುವುದರ ಜೊತೆಗೆ ಅಗತ್ಯ ಆಹಾರ ವಸ್ತುಗಳ ಬೆಲೆಗಳನ್ನು ಸ್ಥಿರಗೊಳಿಸಲು ಸರ್ಕಾರದ ಸರಣಿ ಕಾರ್ಯಕ್ರಮದ ಭಾಗ ಇದಾಗಿದೆ. ಪ್ರತಿ ಕೆ.ಜಿ ಗೆ ೩೦ ರೂಪಾಯಿಯಂತೆ ಭಾರತ್ ಬ್ರ್ಯಾಂಡ್ ಗೋಧಿ ಹಿಟ್ಟು ಲಭ್ಯವಿರುತ್ತದೆ. ಇದೇ ವೇಳೆ ನಾಗರಿಕರು ಪ್ರತಿ ಕೆ.ಜಿ ಗೆ ೩೪ ರೂಪಾಯಿಯಂತೆ ಭಾರತ್ ಬ್ರ್ಯಾಂಡ್ ಅಕ್ಕಿಯನ್ನು ಖರೀದಿಸಬಹುದಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಪ್ರಲ್ಹಾದ್ ಜೋಶಿ, ಭಾರತ್ ಬ್ರ್ಯಾಂಡ್ ಅಕ್ಕಿ ಮತ್ತು ಗೋಧಿ ಹಿಟ್ಟಿನ ಮಾರಾಟವು, ಮಾರುಕಟ್ಟೆಯಲ್ಲಿ ಕೈಗೆಟಕುವ ದರದಲ್ಲಿ ಲಭ್ಯವಿದ್ದು, ಗ್ರಾಹಕರ ಬೇಡಿಕೆಗೆ ಅನುಗುಣವಾಗಿ ಅಗತ್ಯ ಪ್ರಮಾಣದಲ್ಲಿ ಪೂರೈಕೆ ಮಾಡಲಾಗುವುದು. ಪ್ರಮುಖ ಆಹಾರ ಪದಾರ್ಥಗಳ ಬೆಲೆಯನ್ನು ತಗ್ಗಿಸಲು ಇದು ಸಹಕಾರಿಯಾಗಿದೆ ಎಂದರು. ಕೇಂದ್ರೀಯ ಭಂಡಾರ್ ಎನ್‌ಎಫ್‌ಇಡಿ ಮತ್ತು ಎನ್‌ಸಿಸಿಎಫ್ ಮಳಿಗೆಗಳಲ್ಲಿ ಭಾರತ್ ಬ್ರ್ಯಾಂಡ್‌ನ ಉತ್ಪನ್ನಗಳನ್ನು ನಾಗರಿಕರು ಖರೀದಿಸಬಹುದು ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಸಂಸತ್ತಿನ ಚಳಿಗಾಲದ ಅಧಿವೇಶನ ಇದೇ ೨೫ ರಿಂದ ಡಿಸೆಂಬರ್ ೨೦ ರವರೆಗೆ ನಡೆಯಲಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ನವೆಂಬರ್ ೨೬ ರಂದು ಸಂವಿಧಾನ ಅಂಗೀಕಾರದ ೭೫ ನೇ ವಾರ್ಷಿಕೋತ್ಸವವನ್ನು ಸಂಸತ್ತಿನ ಸೆಂಟ್ರಲ್ ಹಾಲ್‌ನಲ್ಲಿ ಆಚರಿಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಭಾರತೀಯ ಕರಾವಳಿ ಕಾವಲು ಪಡೆ- ಐಸಿಜಿ, ನವದೆಹಲಿಯಲ್ಲಿ ನಿನ್ನೆ ೨೬ನೇ ರಾಷ್ಟ್ರೀಯ ತೈಲ ಸೋರಿಕೆ ದುರಂತದ ಆಕಸ್ಮಿಕಗಳನ್ನು ತಡೆಯುವ ಕುರಿತ ಮಹತ್ವದ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಐಸಿಜಿ ಯ ಮಹಾನಿರ್ದೇಶಕ ಪರಮೇಶ್ ಶಿವಾನಿ, ಭಾರತೀಯ ಸಮುದ್ರ ನೀರಿನಲ್ಲಿ ತೈಲ ಸೋರಿಕೆ ದುರಂತಗಳನ್ನು ಪರಿಣಾಮಕಾರಿಯಾಗಿ ನಿರ್ವಹಣೆ ಮಾಡುವ ಬಗ್ಗೆ ಪೂರ್ವ ತಯಾರಿ ಕುರಿತು ಪರಾಮರ್ಶೆ ನಡೆಸಿದರು. ಪ್ರಾದೇಶಿಕ ಬೆದರಿಕೆಗಳಾದ ತೈಲ ಮತ್ತು ರಸಾಯನಿಕಗಳ ಸೋರಿಕೆ ದುರಂತಗಳನ್ನು ಎದುರಿಸಲು ಐಸಿಜಿ, ಸರ್ವ ಸನ್ನದ್ಧವಾಗಿದೆ ಎಂದು ತಿಳಿಸಿದರು. ಭಾಗಿದಾರರ ನಡುವೆ ಪಾಲುದಾರಿಕೆ ಬಲಪಡಿಸುವುದು ಪರಸ್ಪರ ಸಹಕಾರ ಮತ್ತು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಬಳಕೆ ಮಾಡುವ ಅಗತ್ಯಗಳನ್ನು ಅವರು ಒತ್ತಿ ಹೇಳಿದರು. ಸಭೆಯಲ್ಲಿ ವಿವಿಧ ಸಚಿವಾಲಯಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸೇರಿದಂತೆ ೮೦ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

**<><*<><>*><>**

ಹೆಸರಾಂತ ಜನಪ್ರಿಯ ಜಾನಪದ ಗಾಯಕಿ ಶಾರದಾ ಸಿನ್ಹಾ ದೆಹಲಿಯಲ್ಲಿ ನಿನ್ನೆ ರಾತ್ರಿ ನಿಧನರಾಗಿದ್ದಾರೆ. ಅವರಿಗೆ ೭೨ ವರ್ಷ ವಯಸ್ಸಾಗಿತ್ತು. ರಾಷ್ಟ್ರ ರಾಜಧಾನಿಯಲ್ಲಿರುವ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಅವರು ಕೊನೆಯುಸಿರೆಳೆದರು. ಭೋಜಪುರಿ ಮತ್ತು ಮೈಥಿಲಿ ಜಾನಪದ ಹಾಡುಗಾರಿಕೆಯಲ್ಲಿ ಅವರು ಖ್ಯಾತರಾಗಿದ್ದರು. ಅವರು ಪ್ರತಿಷ್ಠಿತ ಪದ್ಮಶ್ರೀ, ಪದ್ಮ ಭೂಷಣ ಮತ್ತು ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿಗಳಿಗೆ ಭಾಜನರಾಗಿದ್ದರು. ಶಾರದಾ ಸಿನ್ಹಾ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವಾರು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ. ಶೋಕ ಸಂದೇಶದಲ್ಲಿ ಅವರು, ಮೃತರ ಸಾಧನೆಗಳನ್ನು ಸ್ಮರಿಸಿ, ಅವರ ಆತ್ಮಕ್ಕೆ ಶಾಂತಿ ಕೋರಿದ್ದಾರೆ.

**<><*<><>*><>**

ಕೇಮನ್ ದ್ವೀಪದಲ್ಲಿ ನಡೆದ ವಿಶ್ವ ಬಾಕ್ಸಿಂಗ್ ಫೆಡರೇಶನ್‌ನ ಸೂಪರ್ ಫೆದರ್‌ವೇಟ್ ಪಂದ್ಯಾವಳಿಯಲ್ಲಿ ಭಾರತದ ಮನ್‌ದೀಪ್ ಜಂಗ್ರಾ ವಿಶ್ವ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ನಿನ್ನೆ ಬ್ರಿಟನ್‌ನ ಕಾನರ್ ಮೆಕಿಂತೋಷ್ ಅವರನ್ನು ೧೦-೦ ಅಂಕಗಳ ಅಂತರದಿಂದ ಸೋಲಿಸುವ ಮೂಲಕ ಮಂದೀಪ್ ಜಂಗ್ರಾ, ಯಾವುದೇ ವೃತ್ತಿಪರ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ ವಿಶ್ವ ಚಾಂಪಿಯನ್ ಆದ ಮೊದಲ ಭಾರತೀಯ ಬಾಕ್ಸರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ೨೦೧೪ರ ಗ್ಲಾಸ್ಗೋ ಆವೃತ್ತಿಯಲ್ಲಿ ಕಾಮನ್‌ವೆಲ್ತ್ ಗೇಮ್ಸ್ ಬೆಳ್ಳಿ ಪದಕ ಗೆದ್ದಿದ್ದ ಮಂದೀಪ್, ಇದುವರೆಗೆ ತಮ್ಮ ವೃತ್ತಿಪರ ಜೀವನದಲ್ಲಿ ಕೇವಲ ಒಂದು ಬಾರಿ ಸೋಲನುಭವಿದ್ದಾರೆ. ಅವರು ತಮ್ಮ ೧೨ ಪಂದ್ಯಗಳಲ್ಲಿ ೧೧ ರಲ್ಲಿ ಗೆದ್ದಿದ್ದು, ಇದರಲ್ಲಿ ಏಳು ನಾಕೌಟ್ ಹಂತದ ವಿಜಯಗಳಾಗಿವೆ.

**<><*<><>*><>**

ಮುಂದಿನ ವರ್ಷದ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ೨೦೨೫ ಕ್ಕಾಗಿ ಆಟಗಾರರ ಹರಾಜು ಪ್ರಕ್ರಿಯೆ ಸೌದಿ ಅರೇಬಿಯಾದ ಜೆಡ್ಡಾದಲ್ಲಿ ಈ ತಿಂಗಳ ೨೪ ಮತ್ತು ೨೫ ರಂದು ನಡೆಯಲಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿ- ಬಿಸಿಸಿಐ ಪ್ರಕಟಿಸಿದೆ. ವಿದೇಶದಲ್ಲಿ ಹರಾಜು ನಡೆಸುತ್ತಿರುವುದು ಇದು ಎರಡನೇ ಬಾರಿಯಾಗಿದ್ದು, ಐಪಿಎಲ್ ೨೦೨೪ ರ ಹರಾಜು ಪ್ರಕ್ರಿಯೆಯನ್ನು ದುಬೈನಲ್ಲಿ ಆಯೋಜಿಸಲಾಗಿತ್ತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧೨ ಕ್ಕೆ <>*><>**